ಮೈಸೂರ ಗೆಜೆಟ್.

ಸಂ. 42.] ಸರ್ಕಾರದಿಂದ ಪ್ರಾಯಿಷ್ ಆಯ್ದ. [ನಂ. 16.

ಬೆಂಗಳೂರು, ಗುರುವಾರ, ಏಪ್ರೆಲ್ ತಾ॥ 18, ಸ್ ೧೯೦೭.

ಈ ಪತ್ರಿಕೆಯು ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮಂ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೆ ವ ಇನಾಂ ಸೂಪರ್ಡಿಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಲೆಕ್ಟ್ರೋಲರವರು, ಪಬ್ಲಿಕ್ ವರ್ಕಸ್ ಆಫಿಸರಗಳು, ಫಾರೆಸ್ಟ್ರು, ರೆಜಿಸ್ಟ್ರೇರ್ ವ ಎಡ್ಯುಕೇಷನ್ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ವ ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಪೆಲ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೋಲೀಸ್ ಸೂಪರ್ಡಿಟೆಂಡೆಂಟರು, ಫಾರೆಸ್ಟ್ರು ಆಫಿಸರಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್ಗಳು, ವಗೈರೆ ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟಾಫೀಸ್ ನೋಟಿಸುಗಳು.

3ನೆ ಭಾಗ—ಲೆಜಿಸ್ಲೇಟಿವ್ ರೆಗ್ಯುಲೇಷ್ಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು.

4ನೆ ಭಾಗ—ಸರ್ಕಾರೀ ಕಾಗದ ಪತ್ರಗಳು.

I ನೆ ಭಾಗ.

ಮೈಸೂರು ಸೀಮೆಯ ಶ್ರೀಮಂ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 3ನೆ ಏಪ್ರೆಲ್ 1907.

ನಂ. 9176—ಸ್ಯಾನಿಟರಿ 141-06-10, ತುಮಕೂರು ಡಿಸ್ಟ್ರಿಕ್ಟು ಕೊರಟಗೆರೆ ಸಬ್ ತಾಲ್ಲೂಕಿನ ರಾಮಪುರ ಗ್ರಾಮಕ್ಕೆ ಶ್ರೀ ವೆಂಕಟರಮಣಸ್ವಾಮಿಯವರ ರಥೋತ್ಸವ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮಂ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 9ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ನಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡಸುವುದರಲ್ಲಿ ಮೈಸೂರು ಶ್ರೀಮಂ ಮಹಾರಾಜರವರ ಸರ್ಕಾರದವರು, 1907ನೆಯ ವರ್ಷದ ಏಪ್ರೆಲ್ 27ನೆ ತಾರೀಖಿನಿಂದ 1907ನೆ ಮೇ 2ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್ನಾಮೆಗೆ ವಿರೋಧವಾಗಿ ಮೇಲ್ಕಂಡ ರಥೋತ್ಸವಕ್ಕೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.